ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

25

ಇಲಾಖೆ / ವಿಷಯ : DEPARTMENT / SUBJECT: ಸಂಸತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ  ದಿನಾಂಕ : DATE : 26/8/2020

# ಸೆ.14ರಿಂದ ಮಳೆಗಾಲದ ಅಧಿವೇಶನಕ್ಕೆ ಶಿಫಾರಸು

ವಿ.ವಾ. 26-8-20

ನವದೆಹಲಿ: ಸೆಪ್ಟೆಂಬರ್ 14ರಿಂದ ಅಕ್ಟೋಬರ್ 1ರವರೆಗೆ ಸಂಸತ್ ಮುಂಗಾರು ಅಧಿವೇಶನ ನಡೆಸಲು ಸಂಸದೀಯ ವ್ಯವಹಾರ ಕುರಿತ ಸದನ ಸಮಿತಿ ಶಿಫಾರಸು ಮಾಡಿದೆ. ಈ ಅವಧಿಯಲ್ಲಿ ಒಟ್ಟು 18 ಬೈಠಕ್‌ಗಳು (ಸಿಟ್ಟಿಂಗ್) ನಡೆಯಲಿವೆ ಎಂದು ಮೂಲಗಳು ತಿಳಿಸಿವೆ.



ಕರೊನಾ ಹಿನ್ನೆಲೆಯಲ್ಲಿ ಹಲವು ಮುಂಜಾಗ್ರತಾ ಕ್ರಮಗಳೊಂದಿಗೆ ಈ ಬಾರಿಯ ಅಧಿವೇಶನ ನಡೆಯಲಿದ್ದು ಬಿರುಸಿನ ತಯಾರಿ ನಡೆದಿದೆ. ದೈಹಿಕ ಅಂತರ ನಿಯಮ ಕಾಪಾಡುವ ಉದ್ದೇಶದಿಂದ ಲೋಕಸಭೆ ಮತ್ತು ರಾಜ್ಯಸಭೆಗಳ ಚೇಂಬರ್ ಮತ್ತು ಗ್ಯಾಲರಿಗಳನ್ನೂ ಸಂಸದರು ಕುಳಿತುಕೊಳ್ಳಲು ಬಳಸಲು ಯೋಜಿಸಲಾಗಿದೆ. 1952ರ ನಂತರ ಭಾರತೀಯ ಸಂಸತ್ತಿನ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಇಂಥ ಕ್ರಮವನ್ನು ಅನುಸರಿಸಲಾಗುತ್ತಿದೆ. ಬೃಹತ್ ಪ್ರದರ್ಶನ ಪರದೆಗಳನ್ನೂ ಇದೇ ಮೊದಲ ಬಾರಿಗೆ ಅಳವಡಿಸಲಾಗಿದೆ.